**ಓ.ಎಸ್. ನಂ. 86/2018** **ಡಿ.ಡಬ್ಲ್ಯೂ- 5**

**ಸಾಕ್ಷಿಯನ್ನು ದಿನಾಂಕ 5.4.2025 ರಂದು ಕರೆಸಿ ಪ್ರಮಾಣ ವಚನ ಬೋದಿಸಲಾಯಿತು.**

**<u>ಮುಖ್ಯ ವಿಚಾರಣೆಃ ಪ್ರತಿವಾದಿ ಪರ ವಕೀಲರಿಂದಃ</u>**

ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದು, ಅದರಲ್ಲಿರುವ ಅಂಶಗಳು ಸತ್ಯವಾಗಿದ್ದು, ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ. ನಿಡಿ2 ದಾನಪತ್ರಕ್ಕೆ ನಾನು ಸಾಕ್ಷಿದಾರನಾಗಿ ಸಹಿ ಮಾಡಿರುತ್ತೇನೆ. ಸದರಿ ದಾನಪತ್ರವನ್ನು ಸೊರಂ ದೇವಿ ರವರು ಎನ್.ನಾಗರಾಜು ರವರಿಗೆ ಬರೆದುಕೊಟ್ಟಿರುತ್ತಾರೆ. ಸಾಕ್ಷಿದಾರರು ಸದರಿ ದಾಖಲೆಯಲ್ಲಿರುವ ಸೊರಂ ದೇವಿರವರ ನಾಲ್ಕು ಸಹಿಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ಒಟ್ಟಾಗಿ ಈಗಾಗಲೇ ನಿಡಿ2 ಎ ಎಂದು ಗುರುತಿಸಲಾಗಿರುತ್ತದೆ. ಸಾಕ್ಷಿದಾರರು ಎನ್.ನಾಗರಾಜುರವರ ನಾಲ್ಕು ಸಹಿಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ಒಟ್ಟಾಗಿ ಈಗಾಗಲೇ ನಿಡಿ2 ಬಿ ಎಂದು ಗುರುತಿಸಲಾಗಿರುತ್ತದೆ. ಸಾಕ್ಷಿದಾರರು ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ2 ಇ ಎಂದು ಗುರುತಿಸಲಾಗಿರುತ್ತದೆ. ಸದರಿ ದಾಖಲೆಗೆ ಖಾನ್ ಸಿಂಗ್ ಮತ್ತು ನಿಗರಾಜು ರವರು ಸಾಕ್ಷಿದಾರರಾಗಿ ಸಹಿ ಮಾಡಿದ್ದು ಅವರ ಸಹಿಗಳನ್ನು ಸಾಕ್ಷಿದಾರರು ನೋಡಿ ಗುರುತಿಸಿದ್ದು ಅವುಗಳನ್ನು ಈಗಾಗಲೇ ನಿಪಿ2 ಸಿ ಮತ್ತು ನಿಡಿ2 ಡಿ ಎಂದು ಗುರುತಿಸಲಾಗಿರುತ್ತದೆ.

ಪಾಟೀ ಸವಾಲುಃ ವಾದಿ ಪರ ವಕೀಲರು ಸಮಯ ಕೋರಿದ್ದು, ಸಮಯ ನೀಡಲಾಯಿತು.

(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸಾ.ಸ.ಇ.ಒ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ
ಹೆಚ್.ಡಿ.ಕೋಟೆ.